# 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,

## ಚನ್ನರಾಯಪಟ್ಟಣ.

## CC 879/2020

| | | | |
|---|---|---|---|
| ಸಾಕ್ಷಿದಾರರ ಹೆಸರು | ಃ | ಶೇಖರ | **C.W –5** |
| ತಂದೆಯ ಹೆಸರು | ಃ | ಗುಂಡಯ್ಯ | **P.W –6** |
| ವಯಸ್ಸು | ಃ | 47 ವರ್ಷ | |
| ಉದ್ಯೋಗ | ಃ | ವ್ಯವಸಾಯ | **ಪ್ರಮಾಣ ವಚನ ಬೋಧಿಸಲಾಯಿತು.** |
| ವಾಸ | ಃ | ಗಂಜಿಗೆರೆ ಗ್ರಾಮ | ದಿನಾಂಕಃ **23.07.2026** |

---

ಮುಖ್ಯವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಸಾಕ್ಷಿ ನಿಪಿ–2 ಅನ್ನು ತೋರಿಸಲಾಗಿ, ಸದರಿ ದಾಖಲಾತಿಯಲ್ಲಿ ಸಾಕ್ಷಿ ತನ್ನ ಸಹಿ ಇರುವುದಾಗಿ ಒಪ್ಪಿಕೊಂಡಿದ್ದು, ಸದರಿ ಸಹಿಯನ್ನು ನಿಪಿ–2(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 6–7 ವರ್ಷಗಳ ಹಿಂದೆ ನುಗ್ಗೆಹಳ್ಳಿ ಪೊಲೀಸ್ ಠಾಣೆಯಲ್ಲಿ ಪೊಲೀಸರ ಹೇಳಿಕೆ ಮೇರೆಗೆ ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರಕ್ಕೆ, ಯಾವ ಸಮಯಕ್ಕೆ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನನ್ನ ಜೊತೆ ಇನ್ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಯಾವುದೇ ವಸ್ತುಗಳನ್ನು ಅಮಾನತುಪಡಿಸಿಕೊಂಡಿಲ್ಲ.

***(ಈ ಹಂತದಲ್ಲಿ ಸಾಕ್ಷಿಯನ್ನು ಸಂಪೂರ್ಣ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಸರ್ಕಾರಿ ಅಭಿಯೋಜಕರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)***

**ಪಾಟೀ ಸವಾಲುಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕಃ 26.08.2020 ರಂದು ನುಗ್ಗೆಹಳ್ಳಿ ಪೋಲೀಸ್ ನವರು ಗಂಜಿಗೆರೆ ಗ್ರಾಮದ ಸ.ನಂ. 45 ರ ಜಮೀನಿನಲ್ಲಿ ಚಾಸಾ–1 ಹಾಗೂ ಆರೋಪಿಯ ಗಲಾಟೆ ವಿಚಾರಕ್ಕೆ ಕುರಿತು ಸ್ಥಳದಲ್ಲಿ ಪಂಚನಾಮೆಯನ್ನು ಜರುಗಿಸಿ ನನ್ನ ಸಮಕ್ಷಮ ಒಂದು ದೊಣ್ಣೆ ಹಾಗೂ ಎಡಮಟ್ಟೆಯನ್ನು ಅಮಾನತುಪಡಿಸಿಕೊಂಡು ಮಹಜರಿಗೆ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪೋಲೀಸರು ನನ್ನ ಸಮಕ್ಷಮ ಮಹಜರು ಕ್ರಮ ಜರುಗಿಸಿ ಕೃತ್ಯಕ್ಕೆ ಬಳಸಿದ

ವಸ್ತುಗಳನ್ನು ಅನಮಾತುಪಡಿಸಿಕೊಂಡಿದ್ದರು ಸಹ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು** – ಸಾಕ್ಷಿಯು ಪ್ರತಿಕೂಲ ಸಾಕ್ಷಿಯಾದ್ದರಿಂದ ಪಾಟಿ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆ ಇಲ್ಲ .**

(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ.ಚನ್ನರಾಯಪಟ್ಟಣ.